ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
**ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್**
**ಸಂವಹನ ಮತ್ತು ಸಾಮರ್ಥ್ಯ ಅಭಿವೃದ್ಧಿ ಘಟಕ**

ಸಂಖ್ಯೆ : ಗ್ರಾಅಪ/ರಾನೀನೈಮಿ/ಎನ್‌ಬಿಎ/ GOI-05/2012-13 ದಿನಾಂಕ :21.04.2014

**ರವರಿಗೆ,**
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾಪಂಚಾಯತ್ ಚಿತ್ರದುರ್ಗಾ.

**ನೆನಪೋಲೆ**

**ಮಾನ್ಯರೇ,**

**ವಿಷಯ:** ವಾಣಿವಿಲಾಸಪುರ ಗ್ರಾಮ ಪಂಚಾಯಿತಿಯಲ್ಲಿ ವೈಯಕ್ತಿಕ ಗೃಹ ಶೌಚಾಲಯಗಳ ನಿರ್ಮಾಣದಲ್ಲಿ ಅವ್ಯವಹಾರ ನಡೆದಿದೆ ಎಂಬ ದೂರಿನ ಕುರಿತು.

**ಉಲ್ಲೇಖ:** 1) ಶ್ರೀಉಮೇಶ್ ಮಾಜಿ ಗ್ರಾ.ಪಂ ಉಪಾಧ್ಯಕ್ಷರು,ವಾಣಿವಿಲಾಸಪುರ ,ದಿನಾಂಕ 15.07.2013.
2) ಈ ಕಚೇರಿಪತ್ರ ಸಂಖ್ಯೆ:ಗ್ರಾಅಪ/ರಾನೀನೈಮಿ/ನಿಭಾಅ/GOI-05/2012-13,ದಿನಾಂಕ 29.07.2013

-----

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಚಿತ್ರದುರ್ಗ ಜಿಲ್ಲೆ, ಹಿರಿಯೂರು ತಾಲೂಕು, ವಾಣಿವಿಲಾಸಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ 10 ಹಳ್ಳಿಗಳಲ್ಲಿ 2010-11ನೇ ಸಾಲಿನಲ್ಲಿ ಹಾಗೂ 2011-12ನೇ ಸಾಲಿನಲ್ಲಿ ಬಿ.ಪಿ.ಎಲ್ ಕುಟುಂಬಗಳಿಗೆ ಶೌಚಾಲಯ ನಿರ್ಮಿಸಲು ಗುತ್ತಿಗೆ ನೀಡಿದ್ದು, ಕಾಮಗಾರಿಯು ಪೂರ್ಣವಾಗದೇ ಸಂಸ್ಥೆಯವರಿಗೆ ಸಂಪೂರ್ಣ ಅನುದಾನವನ್ನು ಪಾವತಿಸಿರುವುದಾಗಿ ಉಲ್ಲೇಖ (1)ರಂತೆ ಶ್ರೀ ಉಮೇಶ್, ಮಾಜಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರು, ವಾಣಿವಿಲಾಸಪುರ ಇವರು ರಾಜ್ಯ ಕಚೇರಿಗೆ ದೂರು ಸಲ್ಲಿಸಿದ್ದರು.

ಇದಕ್ಕೆ ಸಂಬಂಧಿಸಿದಂತೆ ಸದರಿ ಗ್ರಾಮ ಪಂಚಾಯಿತಿಯಲ್ಲಿ ಈ ಬಗ್ಗೆ ದಿನಾಂಕ 30.8.2013ರೊಳಗಾಗಿ ಕೂಲಂಕುಶವಾಗಿ ತನಿಖೆ ನಡೆಸಿ, ತಪ್ಪಿಸ್ಥರ ವಿರುದ್ಧ ಕ್ರಮ ಕೈಗೊಂಡು ಈ ಕಚೇರಿಗೆ ವರದಿ ನೀಡುವಂತೆ ಉಲ್ಲೇಖ(2)ರಂತೆ ಸೂಚಿಸಲಾಗಿತ್ತು. ಆದರೆ ಇಲ್ಲಿಯವರೆವಿಗೂ ಈ ಬಗ್ಗೆ ಕ್ರಮ ಕೈಗೊಂಡಿರುವ ಕುರಿತು ಯಾವುದೇ ಮಾಹಿತಿ ನೀಡದಿರುವುದು ವಿಷಾದನೀಯ ಸಂಗತಿಯಾಗಿದೆ. ಈ ಹಿನ್ನೆಯಲ್ಲಿ ದಿನಾಂಕ 26.04.2014ರ ಒಳಗಾಗಿ ಈ ಬಗ್ಗೆ ತನಿಖೆ ನಡೆಸಿ ರಾಜ್ಯ ಕಚೇರಿಗೆ ತಪ್ಪದೇ ವರದಿ ನೀಡಲು ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ

ಮಿಷನ್ ನಿರ್ದೇಶಕರು
ರಾಜ್ಯ ನೀರು & ನೈರ್ಮಲ್ಯ ಮಿಷನ್ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು
ಗ್ರಾ ಅ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು:-**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತಕಾರ್ಯದರ್ಶಿಯವರ ಮಾಹಿತಿಗಾಗಿ.
2. ಕಾರ್ಯದರ್ಶಿಗಳು(ಪಂ.ರಾ)ಗ್ರಾಮೀಣಾಭಿವೃದ್ಧಿ ವ& ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರ ಮಾಹಿತಿಗಾಗಿ.
3. ಶ್ರೀ ಉಮೇಶ್, ಮಾಜಿ ಗ್ರಾ.ಪಂ ಉಪಾಧ್ಯಕ್ಷರು ವಾಣಿವಿಲಾಸಪುರ (ಅಂಚೆ)ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ, ಇವರ ಮಾಹಿತಿಗಾಗಿ.

2ನೇ ಮಹಡಿ, ಕೆ.ಹೆಚ್.ಬಿ. ಬಿಲ್ಡಿಂಗ್, ಕಾವೇರಿಭವನ, ಬೆಂಗಳೂರು - 560 009.
ದೂರವಾಣಿ ಸಂ.22221861-62 : - ಫ್ಯಾಕ್ಸ್ :-22221862 E-mail : wsrdpr@gmail.com.